**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.2371/2025**

| | | |
|---|---|---|
| ಸಾಕ್ಷಿದಾರರ ಹೆಸರು | : ನಾಗೇಶ್‌ಗೌಡ | ಫ್ರಾಸಾ-1 |
| ತಂದೆಯ ಹೆಸರು | : ಅಣ್ಣೇಗೌಡ | ಚಾಸಾ-1 |
| ವಯಸ್ಸು | : 75 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ವ್ಯವಸಾಯ | ದಿನಾಂಕಃ 22.07.2026 |
| ವಾಸಸ್ಥಳ | : ನಡುವಿನಮಾಡಕಲ್ | |

**:ಮುಖ್ಯ ವಿಚಾರಣೆ: ಫ್ರಾಜ್ಞ್ಯಾಸ.ಸ.ಅ. ರವರಿಂದ:**

1. ನ್ಯಾಯಾಲಯದ ಮುಂದಿರುವ ಆರೋಪಿ ನನ್ನ ಸಹೋದರ. ಚಾಸಾ-2 ರಿಂದ 4 ರವರ ಪರಿಚಯ ನನಗಿದೆ. ಆರೋಪಿಯೊಂದಿಗೆ ರಾಜೀ ಮಾಡಿಕೊಂಡಿರುತ್ತೇವೆ.

2. ಸಾಕ್ಷಿಯು ದಿ.30.07.2025 ರ ದೂರಿನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ದಿ.02.08.2025 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-2, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಫೋಟೋಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಒಂದು ಕಾಡು ಜಾತಿಯ ದೊಣ್ಣೆ ಮೇಲೆ ತಮ್ಮ ಸಹಿಯನ್ನು ಗುರುತಿಸಿ ಅದರ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ ಹಾಗೂ ಅದನ್ನು ಈ ಹಿಂದೆ ಎಲ್ಲೂ ನೋಡಿಲ್ಲ ಎಂದು ನುಡಿಯುತ್ತಾರೆ.

3. 1 ವರ್ಷದ ಹಿಂದೆ ನಾನು ನನ್ನ ತೋಟದಲ್ಲಿ ಕೆಲಸ ಮಾಡುವಾಗ ಬಿದ್ದು ಪೆಟ್ಟು ಮಾಡಿಕೊಂಡ ಕಾರಣ ಮೂಡಿಗೆರೆ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಪೋಲಿಸರು ನನ್ನ ಸಹಿಗಳನ್ನು ಪಡೆದು ಅದಾದ ಸ್ವಲ್ಪ ದಿನದ ನಂತರ ನಾನು ಕೆಲಸ ಮಾಡುತ್ತಿದ್ದ ಸ್ಥಳಕ್ಕೆ ಬಂದು ಫೋಟೋಗಳನ್ನು ತೆಗೆದಿರುತ್ತಾರೆ. ಯಾವ ವಿಚಾರಕ್ಕೆ ನನ್ನ ಸಹಿಗಳನ್ನು ಪಡೆದು ಫೋಟೋಗಳನ್ನು ತೆಗೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ನಾನು ಆರೋಪಿಯ ವಿರುದ್ಧ ದೂರು ಕೊಟ್ಟಿಲ್ಲ ಹಾಗೂ ಪೋಲಿಸರಿಗೆ ಯಾವುದೇ ಸ್ಥಳ ತೋರಿಸಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುವನ್ನು ವಶಕ್ಕೆ ಪಡೆದಿಲ್ಲ. ನಿಪಿ-1 ಮತ್ತು 2 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ನನ್ನ ಮರುಹೇಳಿಕೆಯನ್ನು ದಾಖಲಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಫ್ರಾಜ್ಞ್ಯಾಸ.ಸ.ಅ. ರವರಿಂದ:**

1. ಸಾಕ್ಷಿಗೆ ನಿಪಿ-1 ಮತ್ತು 2 ರಲ್ಲಿರುವ ಸಂಪೂರ್ಣ ವಿವರವನ್ನು ಓದಿ ಹೇಳಿದ್ದು ಆ ವಿವರಗಳನ್ನು ಸಾಕ್ಷಿಯು ಸಂಪೂರ್ಣವಾಗಿ ಅಲ್ಲಗಳೆಯುತ್ತಾರೆ.

2. ಈಗ ಓದಿ ಹೇಳಿದಂತೆ ದಿ.02.08.2025 ರಂದು ಮೂಡಿಗೆರೆ ಪೋಲಿಸರ ಮುಂದೆ ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-5 ಎಂದು ಗುರುತಿಸಲಾಯಿತು.

3. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿ ನನ್ನ ಸಹೋದರ ಆದ ಕಾರಣ ಅವರಿಗೆ ಶಿಕ್ಷೆಯಾಗುತ್ತದೆ ಎಂದು ಹಾಗೂ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.